# All India Radio: Bangalore
# National Bulletin In Kannada
# 14.03.2026  19.35 hrs

## ಆಕಾಶವಾಣಿ, ಬೆಂಗಳೂರು
## ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಕೊಲ್ಕತ್ತಾದಲ್ಲಿಂದು ೧೮ ಸಾವಿರದ ೬೮೦ ಕೋಟಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ

೨. ಎಲ್‌ಪಿಜಿ ಸಿಲಿಂಡರ್‌ಗಳ ಲಭ್ಯತೆ ಕುರಿತು ನಾಗರಿಕರು ಆತಂಕಪಡುವ ಅಗತ್ಯವಿಲ್ಲ - ಕೇಂದ್ರ ಸರ್ಕಾರ ಸ್ಪಷ್ಟನೆ

೩. ಸಂಘರ್ಷ ಪೀಡಿತ ಪಶ್ಚಿಮ ಏಷ್ಯಾ ರಾಷ್ಟ್ರಗಳಿಂದ ಈವರೆಗೆ ೧ ಲಕ್ಷ ೬೫ ಸಾವಿರ ಭಾರತೀಯರು ಸ್ವದೇಶಕ್ಕೆ

೪. ಎಫ್‌ಐಎಚ್ ಮಹಿಳಾ ಹಾಕಿ ವಿಶ್ವಕಪ್; ಅರ್ಹತಾ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿಂದು ಭಾರತ-ಇಂಗ್ಲೆಂಡ್ ಮುಖಾಮುಖಿ

<><><*><><<>

ಪಶ್ಚಿಮ ಬಂಗಾಳದ ಕೋಲ್ಕತ್ತಾದಲ್ಲಿಂದು ಸುಮಾರು ೧೮ ಸಾವಿರದ ೬೮೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ರಾಷ್ಟ್ರಕ್ಕೆ ಸಮರ್ಪಿಸಿದರು.  ಈ ಪ್ರದೇಶದ ರಸ್ತೆ ಮೂಲಸೌಕರ್ಯಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಸುಮಾರು ೧೬ ಸಾವಿರದ ೯೯೦ ಕೋಟಿ ರೂಪಾಯಿ ವೆಚ್ಚದ ಒಟ್ಟು ೪೨೦ ಕಿಲೋಮೀಟರ್ ಉದ್ದದ ಹಲವು ರಾಷ್ಟ್ರೀಯ ಹೆದ್ದಾರಿ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಅವರು, ಹಡಗು ಸಾಗಾಣೆ ಮತ್ತು ಬಂದರು ಸಂಬಂಧಿತ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿದರು. ನಂತರ ಪುರುಲಿಯಾ-ಆನಂದ್ ವಿಹಾರ್ ಟರ್ಮಿನಲ್-ದೆಹಲಿ ಎಕ್ಸ್‌ಪ್ರೆಸ್ ರೈಲಿಗೆ ಪ್ರಧಾನಿ ಹಸಿರು ನಿಶಾನೆ ತೋರಿದರು.  ಇದರಿಂದ ಪಶ್ಚಿಮ ಬಂಗಾಳ, ಉತ್ತರ ಪ್ರದೇಶ, ಬಿಹಾರ, ಜಾರ್ಖಂಡ್ ಮತ್ತು ದೆಹಲಿ ನಡುವೆ ರೈಲು ಸಂಪರ್ಕ ಬಲಗೊಳ್ಳಲಿದೆ.  ಇದೇ ವೇಳೆ ಅಮೃತ್ ನಿಲ್ದಾಣ್ ಯೋಜನೆಯಡಿ ಪುನರ್ ಅಭಿವೃದ್ಧಿಗೊಳಿಸಲಾದ ಆರು ರೈಲು ನಿಲ್ದಾಣಗಳನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಿದರು.

<><><*><><<>

ಪ್ರಧಾನಿ ನರೇಂದ್ರ ಮೋದಿ ಇಂದು ಅಸ್ಸಾಂನ ಸಿಲ್ಚಾರ್‌ಗೆ ಭೇಟಿ ನೀಡಿ ೨೩ ಸಾವಿರದ ೫೫೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದ್ದಾರೆ.  ಪ್ರಧಾನಮಂತ್ರಿ ಅವರು ಇಂದು ಸಿಲ್ಚಾರ್‌ನ ಅಂಬಿಕಾಪುರದಲ್ಲಿ ಮೂರು ಯೋಜನೆಗಳಿಗೆ ಭೂಮಿ ಪೂಜೆ ನೆರವೇರಿಸಿದರು. ಇವುಗಳಲ್ಲಿ, ೨೨ ಸಾವಿರದ ೮೬೪ ಕೋಟಿ ರೂಪಾಯಿಗಳ ಅಂದಾಜು ವೆಚ್ಚದ ಸಿಲ್ಚಾರ್ ಹೈ-ಸ್ಪೀಡ್ ಕಾರಿಡಾರ್, ಸುಮಾರು ೫೬೫ ಕೋಟಿ ರೂಪಾಯಿಗಳ ಅಂದಾಜು ವೆಚ್ಚದ ಸಿಲ್ಚಾರ್ ಟೌನ್ ಮೇಲ್ಸೇತುವೆ ಮತ್ತು ೧೨೨ ಕೋಟಿ ರೂಪಾಯಿಗಳ ಅಂದಾಜು ವೆಚ್ಚದ ಪಥರ್ಕಂಡಿ ಕೃಷಿ ಮಹಾವಿದ್ಯಾಲಯ ಶಂಕುಸ್ಥಾಪನೆ ನೆರವೇರಿಸಿದರು.

<><><*><><<>

ಹಿಮಾಚಲ ಪ್ರದೇಶ ತನ್ನ ಶ್ರೀಮಂತ ಸಂಸ್ಕೃತಿ, ಸಂಪ್ರದಾಯ ಮತ್ತು ಆತಿಥ್ಯಕ್ಕಾಗಿ ರಾಷ್ಟ್ರಾದ್ಯಂತ ಮನ್ನಣೆ ಗಳಿಸಿದೆ. ಅಲ್ಲದೆ, ದೇಶದ ಸಶಸ್ತ್ರ ಪಡೆಗಳಿಗೆ ಗಣನೀಯ ಕೊಡುಗೆ ನೀಡಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ಧರ್ಮಶಾಲಾದ ಹಿಮಾಚಲ ಪ್ರದೇಶ ಕೇಂದ್ರ ವಿಶ್ವವಿದ್ಯಾಲಯದ ೯ನೇ ಘಟಿಕೋತ್ಸವ ಉದ್ದೇಶಿಸಿ ಮಾತನಾಡಿದ ಅವರು, ಪ್ರಸ್ತುತ ವಿಶ್ವವಿದ್ಯಾಲಯಗಳು, ಅಧ್ಯಾಪಕರ ಉನ್ನತಿಗೆ ಆದ್ಯತೆ ನೀಡಬೇಕು. ನಾವಿನ್ಯತೆಯನ್ನು ಪ್ರೋತ್ಸಾಹಿಸಬೇಕು ಮತ್ತು ಭಾರತದ ಉನ್ನತ ಶಿಕ್ಷಣ ವ್ಯವಸ್ಥೆಯು ಜಾಗತಿಕವಾಗಿ ಸ್ಪರ್ಧಾತ್ಮಕವಾಗಿಸುವ ನಿಟ್ಟಿನಲ್ಲಿ ಸಹಯೋಗವನ್ನು ಬಲಪಡಿಸಬೇಕು ಎಂದು ಸಲಹೆ ನೀಡಿದರು. ೨೦೪೭ರ ವಿಕಸಿತ ಭಾರತದ ಗುರಿಯನ್ನು ಸಾಧಿಸುವಲ್ಲಿ ಯುವಕರು ಮತ್ತು ವಿದ್ಯಾರ್ಥಿಗಳು ಪ್ರಮುಖ ಪಾತ್ರ ವಹಿಸುತ್ತಾರೆ ಎಂದು ಹೇಳಿದರು. ನಂತರ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು, ಯುದ್ಧ ಸ್ಮಾರಕಕ್ಕೆ ಭೇಟಿ ನೀಡಿ, ಹುತಾತ್ಮ ಯೋಧರಿಗೆ ಪುಷ್ಪನಮನ ಸಲ್ಲಿಸಿದರು.

<><><*><><<>

ಭಾರತೀಯ ಧ್ವಜ ಹೊತ್ತ ಎರಡು ಹಡಗುಗಳಾದ ಶಿವಾಲಿಕ್ ಮತ್ತು ನಂದಾ ದೇವಿ ಇಂದು ಮುಂಜಾನೆ ಹಾರ್ಮುಜ್ ಜಲಸಂಧಿಯನ್ನು ಸುರಕ್ಷಿತವಾಗಿ ದಾಟಿವೆ. ಈ ಕುರಿತು ನವದೆಹಲಿಯಲ್ಲಿಂದು

ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಬಂದರುಗಳು, ಹಡಗು ಮತ್ತು ಜಲಮಾರ್ಗಗಳ ಸಚಿವಾಲಯದ ವಿಶೇಷ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿನ್ಹಾ, ಈ ಹಡಗುಗಳು ೯೨ ಸಾವಿರದ ೭೦೦ ಮೆಟ್ರಿಕ್ ಟನ್ ಎಲ್‌ಪಿಜಿಯನ್ನು ಸಾಗಿಸುತ್ತಿವೆ. ಈ ತಿಂಗಳ ೧೬ ಮತ್ತು ೧೭ ರಂದು ಹಡಗುಗಳು ಮುಂದ್ರಾ ಮತ್ತು ಕಾಂಡ್ಲಾ ಬಂದರಿಗೆ ಆಗಮಿಸಲಿವೆ ಎಂದು ತಿಳಿಸಿದ್ದಾರೆ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ

ಮಾತನಾಡಿ, ದೇಶಾದ್ಯಂತದ ಚಿಲ್ಲರೆ ಮಾರಾಟ ಮಳಿಗೆಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಸಮರ್ಪಕವಾಗಿ ಲಭ್ಯವಿದೆ. ದೇಶದಲ್ಲಿ ಸಾಕಷ್ಟು ಕಚ್ಚಾ ತೈಲ ದಾಸ್ತಾನುಗಳಿವೆ ಎಂದು ಮಾಹಿತಿ ನೀಡಿದರು. ಎಲ್‌ಪಿಜಿ ಸಿಲಿಂಡರ್‌ಗಳ ಲಭ್ಯತೆಯ ಬಗ್ಗೆ ನಾಗರಿಕರು ಆತಂಕಪಡುವ ಅಗತ್ಯವಿಲ್ಲ. ರಾಜ್ಯ ಸರ್ಕಾರಗಳಿಗೆ ವಾಣಿಜ್ಯ ಸಿಲಿಂಡರ್‌ಗಳನ್ನು ವಿಲೇವಾರಿ ಮಾಡಲಾಗಿದೆ. ೨೯ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ವಾಣಿಜ್ಯ ಸಿಲಿಂಡರ್‌ಗಳ ವಿತರಣೆ ಪ್ರಾರಂಭವಾಗಿದೆ ಎಂದು ಅವರು ತಿಳಿಸಿದರು. ನಗರ ಪ್ರದೇಶಗಳಲ್ಲಿ ಹಿಂದಿನ ವಿತರಣಾ ದಿನಾಂಕದಿಂದ ೨೫ ದಿನಗಳ ನಂತರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ೪೫ ದಿನಗಳ ನಂತರ ಮಾತ್ರ ಸಿಲಿಂಡರ್‌ಗಳನ್ನು ಬುಕ್ ಮಾಡಬಹುದು. ನಾಗರಿಕರು ಡಿಜಿಟಲ್ ರೂಪದಲ್ಲಿ ಸಿಲಿಂಡರ್‌ಗಳನ್ನು ಬುಕ್ ಮಾಡಬೇಕು ಮತ್ತು ವಿತರಕರ ಮಳಿಗೆ ಹೊರಗೆ ಸರತಿ ಸಾಲಿನಲ್ಲಿ ನಿಲ್ಲುವುದನ್ನು ತಪ್ಪಿಸಬೇಕು ಎಂದು ಸುಜಾತಾ ಶರ್ಮಾ ಮನವಿ ಮಾಡಿದರು.

<>><><*><><<>

ಸಂಘರ್ಷ ಪೀಡಿತ ಪಶ್ಚಿಮ ಏಷ್ಯಾದ ರಾಷ್ಟ್ರಗಳಿಂದ ಕಳೆದ ತಿಂಗಳು ೨೮ ರಿಂದ ಇದುವರೆಗೆ ೧ ಲಕ್ಷ ೭೨ ಸಾವಿರ ಭಾರತೀಯ ಪ್ರಜೆಗಳು ಸ್ವದೇಶಕ್ಕೆ ಮರಳಿದ್ದಾರೆ ಎಂದು ವಿದೇಶಾಂಗ ಸಚಿವಾಲಯದ ಹೆಚ್ಚುವರಿ ಕಾರ್ಯದರ್ಶಿ ಅಸೀಮ್ ಮಹಾಜನ್ ಮಾಹಿತಿ ನೀಡಿದ್ದಾರೆ. ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದ ವಿವಿಧ ವಿಮಾನ ನಿಲ್ದಾಣಗಳಿಗೆ ಹೆಚ್ಚಿನ ವಿಮಾನಗಳ ಸೇರ್ಪಡೆಯೊಂದಿಗೆ ವಾಯು ಸಂಪರ್ಕ ಸುಧಾರಿಸುತ್ತಿದೆ. ಓಮನ್, ಸೌದಿ ಅರೇಬಿಯಾ, ಯುಎಇ ಮತ್ತು ಕತಾರ್‌ನಿಂದ ವಿಮಾನಗಳು ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು. ನೇರ ವಿಮಾನಗಳು ಕಾರ್ಯನಿರ್ವಹಿಸದ ಬಹ್ರೇನ್, ಕುವೈತ್ ಮತ್ತು ಇರಾಕ್‌ನಲ್ಲಿರುವ ಭಾರತೀಯ ಪ್ರಜೆಗಳಿಗೆ ವೀಸಾ ವಿಸ್ತರಿಸಲಾಗುತ್ತಿದೆ ಎಂದು ಅಸೀಮ್ ಮಹಾಜನ್ ಮಾಹಿತಿ ನೀಡಿದರು.

<>><><*><><<>

ಲೆಬನಾನ್ ನಗರದ ದಕ್ಷಿಣ ಭಾಗದಲ್ಲಿ ಆಸ್ಪತ್ರೆಯ ಮೇಲೆ ಇಸ್ರೇಲ್ ನಡೆಸಿದ ದಾಳಿಯಲ್ಲಿ ೧೨ ವೈದ್ಯಕೀಯ ಸಿಬ್ಬಂದಿ ಮೃತಪಟ್ಟಿದ್ದಾರೆ. ಬಿಂಟ್ ಜೆಬೈಲ್ ಜಿಲ್ಲೆಯ ಬುರ್ಜ್ ಖಲೌಯಿಯಾ ಗ್ರಾಮದಲ್ಲಿ ಈ ದಾಳಿ ನಡೆದಿದ್ದು, ಕರ್ತವ್ಯದಲ್ಲಿದ್ದ ವೈದ್ಯರು, ದಾದಿಯರು ಸಾವನ್ನಪ್ಪಿದ್ದಾರೆ ಎಂದು ಲೆಬನಾನ್‌ನ ಸಾರ್ವಜನಿಕ ಆರೋಗ್ಯ ಸಚಿವಾಲಯ ತಿಳಿಸಿದೆ. ಇದೇ ವೇಳೆ, ಲೆಬನಾನ್ ಮೇಲೆ ದಾಳಿಯನ್ನು ಮುಂದುವರಿಸಲಿದ್ದು, ವ್ಯಾಪಕ ದಾಳಿಗೆ ಲೆಬನಾನ್ ಬೆಲೆ ತೆರಬೇಕಾಗುತ್ತದೆ ಎಂದು ಇಸ್ರೇಲ್ ಅಧಿಕಾರಿಗಳು ಎಚ್ಚರಿಸಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ಹಿಜ್ಬೊಲ್ಲಾ ನಾಯಕ ನಹೀಮ್ ಖಾಸಿಂ, ಇಸ್ರೇಲ್‌ನೊಂದಿಗೆ ದೀರ್ಘ ಕಾಲದ ಘರ್ಷಣೆಗೆ ಹಿಜ್ಬೊಲ್ಲಾ ಸಂಘಟನೆ ಸಿದ್ಧವಾಗಿದೆ ಎಂದು ತಿಳಿಸಿದ್ದಾನೆ.

<>><><*><><<>

ಪಾಕಿಸ್ತಾನದ ಮಿಲಿಟರಿ ದಾಳಿಗೆ ಪ್ರತಿಯಾಗಿ ಕುನಾರ್ ಮತ್ತು ನಂಗರ್ಹಾರ್ ಪ್ರಾಂತ್ಯಗಳು ಸೇರಿದಂತೆ ಪಾಕಿಸ್ತಾನದ ಪೂರ್ವ ವಲಯದಲ್ಲಿ ಅಫ್ಘಾನಿಸ್ತಾನ ಪಡೆಗಳು ದಾಳಿ ನಡೆಸಿವೆ. ಕಾರ್ಯಾಚರಣೆಯಲ್ಲಿ ಪಾಕಿಸ್ತಾನದ ೧೪ ಸೈನಿಕರು ಸಾವನ್ನಪ್ಪಿದ್ದು, ೧೧ ಯೋಧರು ಗಾಯಗೊಂಡಿದ್ದಾರೆ ಎಂದು ಅಫ್ಘಾನಿಸ್ತಾನ ರಕ್ಷಣಾ ಸಚಿವಾಲಯ ತಿಳಿಸಿದೆ. ಪಾಕಿಸ್ತಾನದ ವಾಯು ಪಡೆ ನಿನ್ನೆ ಅಫ್ಘಾನಿಸ್ತಾನದ ಕೆಲವು ಪ್ರಾಂತ್ಯಗಳ ಮೇಲೆ ದಾಳಿ ನಡೆಸಿತ್ತು. ದಾಳಿಯಲ್ಲಿ ಹಲವು ನಾಗರಿಕರು ಸಾವನ್ನಪ್ಪಿದ್ದು, ಮೂಲಸೌಕರ್ಯಗಳಿಗೆ ಹಾನಿಯನ್ನುಂಟಾಗಿತ್ತು. ಇದಕ್ಕೆ ಪ್ರತಿಕಾರವಾಗಿ ಈ ದಾಳಿ ನಡೆಸಲಾಗಿದೆ ಎಂದು ತಾಲಿಬಾನ್ ಹೇಳಿದೆ.

<>><><*><><<>

ಜಾರ್ಖಂಡ್‌ನ ಲತೇಹಾರ್ ಜಿಲ್ಲೆಯಲ್ಲಿ, ನಿಷೇಧಿತ ಕಮ್ಯುನಿಸ್ಟ್ ಪಾರ್ಟಿ ಆಫ್ ಇಂಡಿಯಾ ಸಂಘಟನೆಗೆ ಸೇರಿದ ಇಬ್ಬರು ಮಾವೋವಾದಿಗಳನ್ನು ಪೊಲೀಸರು ಬಂಧಿಸಿದ್ದಾರೆ. ವಲಯ ಕಮಾಂಡರ್ ಮೃತ್ಯುಂಜಯ್ ಭೂಯಾ ಮತ್ತು ವಲಯ ಉಪ ಕಮಾಂಡರ್ ಬಬ್ಲು ರಾಮ್ ಬಂಧಿತ ಮಾವೋವಾದಿಗಳಾಗಿದ್ದಾರೆ. ಅವರ ಬಳಿಯಿಂದ ಎಕೆ-೪೭ ರೈಫಲ್, ೨೧ ಗುಂಡುಗಳು ಮತ್ತು ಸುಮಾರು ೧.೬೦ ಲಕ್ಷ ರೂಪಾಯಿ ನಗದನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಚಿಪಾದೋಹರ್ ಪೊಲೀಸ್ ಠಾಣಾ ಪ್ರದೇಶದಲ್ಲಿ ನಿರ್ದಿಷ್ಟ ಗುಪ್ತಚರ ಮಾಹಿತಿಯ ಆಧಾರದ ಮೇಲೆ ಶೋಧ ಕಾರ್ಯಾಚರಣೆ ನಡೆಸಿ, ಇಬ್ಬರು ಮಾವೋವಾದಿಗಳನ್ನು ಬಂಧಿಸಲಾಗಿದೆ. ಮೃತ್ಯುಂಜಯ್ ಭೂಯಾ ಕುರಿತು ಸುಳಿವು ನೀಡಿದರೆ ೧೦ ಲಕ್ಷ ರೂಪಾಯಿ ಬಹುಮಾನ ಹಾಗೂ ಬಬ್ಲು ರಾಮ್ ಕುರಿತು ಸುಳಿವು ನೀಡಿದರೆ ೨ ಲಕ್ಷ ರೂಪಾಯಿ ಬಹುಮಾನವಿತ್ತು ಎಂದು ಪೊಲೀಸ್ ವರಿಷ್ಠಾಧಿಕಾರಿ ಕುಮಾರ್ ಗೌರವ್ ತಿಳಿಸಿದ್ದಾರೆ.

<>><><*><><<>

ಹೈದರಾಬಾದ್‌ನಲ್ಲಿಂದು ನಡೆಯುತ್ತಿರುವ ಎಫ್‌ಐಎಚ್ ಮಹಿಳಾ ಹಾಕಿ ವಿಶ್ವಕಪ್ ೨೦೨೬ರ ಅರ್ಹತಾ ಪಂದ್ಯಾವಳಿಯ ಫೈನಲ್ ಪಂದ್ಯದಲ್ಲಿ ಸಲೀಮಾ ಟೇಟೆ ನೇತೃತ್ವದ ಭಾರತ ಹಾಗೂ ಇಂಗ್ಲೆಂಡ್ ತಂಡಗಳು ಮುಖಾಮುಖಿಯಾಗಿವೆ.

<>><><*><><<>

ಸ್ವಿಟ್ಜರ್ಲೆಂಡ್‌ನ ಬಾಸೆಲ್‌ನಲ್ಲಿ ನಡೆದ ಸ್ವಿಸ್ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಭಾರತದ ತರುಣ್ ಮನ್ನೆಪಲ್ಲಿ ದಿಟ್ಟ ಹೋರಾಟದ ನಂತರ ಇಂಡೋನೇಷಿಯಾದ ಅಂತೋನಿ ಸಿನಿಸುಕಾ

ವಿರುದ್ಧ ಪರಾಭವಗೊಂಡರು. ವಿಶ್ವದ ೪೩ನೇ ಶ್ರೇಯಾಂಕದ ತರುಣ್, ಆಂತೋನಿ ವಿರುದ್ಧ ೧೯-೨೧, ೨೧-೧೯, ೧೩-೨೧ ಅಂತರದಿಂದ ಸೋತರು. ಈ ಮೂಲಕ, ಪಂದ್ಯಾವಳಿಯಲ್ಲಿ ಭಾರತದ ಅಭಿಯಾನಕ್ಕೆ ತೆರೆಬಿದ್ದಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**